ಕರ್ನಾಟಕ ಸರಕಾರ

## ಜಿಲ್ಲಾ ಪಂಚಾಯತ ಕಾರ್ಯಾಲಯ, ಕಲಬುರಗಿ

ಸಂ:ಜಿಪಕ/ಗ್ರಾ.ಪಂ.ಗ್ರಂ/ಮೇ.ಆ.ಕು/2023-24/1512 ದಿನಾಂಕ: 19/20.09.2023

### -: ಅಧಿಸೂಚನೆ :-

ವಿಷಯ: ಕಲಬುರಗಿ ಜಿಲ್ಲೆಯ ಗ್ರಾಮ ಪಂಚಾಯತಿಯಲ್ಲಿ ಬರುವ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಆಯ್ಕೆ ಮಾಡುವ ಸಂಬಂಧ ದಿನ ಪತ್ರಿಕೆಯಲ್ಲಿ ಪ್ರಕಟಣೆಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ:
1) ಸರ್ಕಾರದ ಅಧಿಸೂಚನೆ ಸಂಖ್ಯೆ: ಸರಕಾರಿ ಅಧಿಸೂಚನೆ RDPR/156/GPA/2022 (ಇ) ದಿನಾಂಕ:14-11-2022ರನ್ವಯ
2) ಕಪಂರಾಅ/ಅಭಿವೃದ್ಧಿ/652/2022 ದಿನಾಂಕ:28-12-2022.
3) ಸರ್ಕಾರದ ಆದೇಶ ಸಂ:KPRC-DEV/544/2021 ಬೆಂಗಳೂರು, ದಿನಾಂಕ: 19-12-2022 ರನ್ವಯ
4) ಸರ್ಕಾರಿ ಆದೇಶ ಸಂ: ಸಿಆಸುಇ1 ಸಹಿಮ 2022 ದಿನಾಂಕ:28-12-2022
5) ಸರಕಾರಿ ಆದೇಶ ಸಂ: ಸಿಆಸುಇ2 ಸಹಿಮ ರನ್ವಯ 2023 ದಿನಾಂಕ:08-03-2023
6) ಸರ್ಕಾರದ ಆದೇಶ ಸಂಖ್ಯೆ RDPR 425 ಜಿಪಅ 2023 ದಿನಾಂಕ:16-08-2023.
7) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆ ದಿನಾಂಕ:15-09-2023.

* * * * *

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ ನಿಯಮಗಳು 2022ನ್ನು ಉಲ್ಲೇಖ-1ರಂತೆ ಜಾರಿಗೊಳಿಸಲಾಗಿದೆ. ಉಲ್ಲೇಖ-1ರ ಅಧಿಸೂಚನೆಯಲ್ಲಿರುವಂತೆ ಜಾರಿಯಲ್ಲಿರುವ ನಿಯಮಗಳಡಿಯಲ್ಲಿ ಗ್ರಾಮ ಪಂಚಾಯತ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಇರುವ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಉಲ್ಲೇಖ-2ರಲ್ಲಿ ನಿರ್ದೇಶಿಸಲಾಗಿದೆ.

ಕಲಬುರಗಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಮಂಜೂರಾದ ಗ್ರಾಮ ಪಂಚಾಯತ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗಳನ್ನು ಸರಕಾರಿ ಅಧಿಸೂಚನೆ ಸಂಖ್ಯೆ:RDPR/15/GPA/2022 (ಇ) ದಿನಾಂಕ: 14-11-2022ರನ್ವಯ ಹಾಗೂ ಸರ್ಕಾರದ ಆದೇಶ ಸಂ:KPRC-DEV/544/2021 ಬೆಂಗಳೂರು, ದಿನಾಂಕ: 19-12-2022ರನ್ವಯ ಕಲಬುರಗಿ ಜಿಲ್ಲೆಯ ಅಫಜಲಪೂರ ತಾಲೂಕಿನ 06 ಗ್ರಾಮ ಪಂಚಾಯತ, ಆಳಂದ ತಾಲೂಕಿನ 07 ಗ್ರಾಮ ಪಂಚಾಯತ, ಕಾಳಗಿ ತಾಲೂಕಿನ 02 ಗ್ರಾಮ ಪಂಚಾಯತ, ಚಿತ್ತಾಪೂರ ತಾಲೂಕಿನ 05 ಗ್ರಾಮ ಪಂಚಾಯತ, ಶಹಾಬಾದ ತಾಲೂಕಿನ 01 ಗ್ರಾಮ ಪಂಚಾಯತ, ಚಿಂಚೋಳಿ ತಾಲೂಕಿನ 04 ಗ್ರಾಮ ಪಂಚಾಯತ, ಕಲಬುರಗಿ ತಾಲೂಕಿನ 05 ಗ್ರಾಮ ಪಂಚಾಯತ, ಜೇವರ್ಗಿ ತಾಲೂಕಿನ 04, ಯಡ್ರಾಮಿ ತಾಲೂಕಿನ 04, ಸೇಡಂ ತಾಲೂಕಿನ 04 ಗ್ರಾಮ ಪಂಚಾಯತ ಹಾಗೂ ಕಮಲಾಪೂರ ತಾಲೂಕಿನ 01 ಗ್ರಾಮ ಪಂಚಾಯತ ಗ್ರಂಥಾಲಯ ಒಟ್ಟು 41 ಹೊಸ ಗ್ರಾಮ ಪಂಚಾಯತ ಗ್ರಂಥಾಲಯಗಳು ಹಾಗೂ ಹಳೆಯ 04 ಗ್ರಾಮ ಪಂಚಾಯತ ಗ್ರಂಥಾಲಯಗಳಾದ ಆಳಂದ ತಾಲೂಕಿನ ಪಡಸಾವಳಗಿ ಹಾಗೂ ಕೂಡಲಹಂಗರಗಾ ಅಫಜಲಪೂರ ತಾಲೂಕಿನ ಮಾಶ್ಯಾಳ ಕಲಬುರಗಿ ತಾಲೂಕಿನ ಮಹಾಗಾಂವ ಗ್ರಾಮ ಪಂಚಾಯತ ಗ್ರಂಥಾಲಯಗಳಲ್ಲಿ ವಯೋನಿವೃತ್ತಿ ಹಾಗೂ ವರ್ಗಾವಣೆ ಪ್ರಯುಕ್ತ ಖಾಲಿಯಾಗಿರುವುದರಿಂದ ಸರಕಾರಿ ಅಧಿಸೂಚನೆ ಸಂಖ್ಯೆ:RDPR/156/GPA/2022 (ಇ) ದಿನಾಂಕ:14-11-2022ರನ್ವಯ ಕ್ರ.ಸಂ.10ರ ಪ್ರಕಾರ ಸದರಿ ಗ್ರಾಮ ಪಂಚಾಯತ ಮೇಲ್ವಿಚಾರಕರ ಹುದ್ದೆಯನ್ನು ಖಾಲಿಯಾದ ದಿನಾಂಕವನ್ನು ಗಣನೆಗೆ ತೆಗೆದುಕೊಂಡು ರೋಸ್ಟರ್ ಬಿಂದುವನ್ನು ನಿಗದಿಪಡಿಸಲಾಗಿದ್ದು, ಒಟ್ಟು ಮೇಲ್ವಿಚಾರಕರ ಹುದ್ದೆಗಳು 45 ಖಾಲಿ ಇರುತ್ತವೆ.

ಪು.ತೀ.ನೋ..

ಸರಕಾರಿ ಆದೇಶ ಸಂಖ್ಯೆ:ಕ.ಪಂ.ರಾ.ಅ/ಅಭಿವೃದ್ಧಿ/652/2022 ದಿನಾಂಕ:28-12-2022 ರನ್ವಯ ನೇಮಕಾತಿ ಪ್ರಕ್ರಿಯೆಯಂತೆ ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ1 ಸಹಿಮ 2022 ದಿನಾಂಕ:28-12-2022ರನ್ವಯ ರೋಸ್ಟರ್ ಬಿಂದುವಿನನ್ವಯ ಸರಕಾರಿ ಆದೇಶ ಸಂಖ್ಯೆ: ಸಿಆಸುಇ02ಸಹಿಮ ರನ್ವಯ 2023 ದಿನಾಂಕ:08-03-2023ರ ಸಮತಳ ಮೀಸಲಾತಿಯನ್ವಯ ಸದರಿ ಹುದ್ದೆಗಳನ್ನು ಭರ್ತಿ ಮಾಡಬೇಕಾದ ಪ್ರಯುಕ್ತ RDPR/156/GPA/2022 (ಇ) ದಿನಾಂಕ:14-11-2022ರನ್ವಯ ಕ್ರ.ಸಂ.ರನ್ವಯ ಜಿಲ್ಲೆಯ ಒಂದು ಘಟಕವನ್ನಾಗಿ ಪರಿಗಣಿಸಿ ಈ ಕೆಳಗಿನಂತೆ ಖಾಲಿ ಇರುವ ಹೊಸ 41 ಗ್ರಾಮ ಪಂಚಾಯತಗಳನ್ನು ಅಕ್ಷರಾನುಕ್ರಮ (ALPHABETICALLY) ಜೋಡಿಸಿ ನಿಗದಿಪಡಿಸಿದ ರೋಸ್ಟರ್ ಬಿಂದುವಿನ ಪ್ರಕಾರ ಅರ್ಜಿ ಅಹ್ವಾನಿಸಲಾಗಿದೆ. ಸದರಿ ಪ್ರಕಟಣೆಯನ್ನು ರಾಜ್ಯ ಮಟ್ಟದ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಕೋರಿದೆ.

ಮೇಲಿನ ವಿಷಯ ಹಾಗೂ ಕಂಡಿಕೆಗೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತ ಗ್ರಂಥಾಲಯಗಳ ಮೇಲ್ವಿಚಾರಕರ ಹುದ್ದೆಗಳು ಖಾಲಿ ಇದ್ದು, ಹುದ್ದೆ ತುಂಬಲು ಸರ್ಕಾರಿ ಆದೇಶದಡಿಯಲ್ಲಿ ಮೀಸಲಾತಿ ಹಂತ (ರೋಸ್ಟರ್ ಪದ್ಧತಿ) ದಂತೆ ಮೇಲ್ವಿಚಾರಕರ ಹುದ್ದೆಗೆ ಈ ಕೆಳಗಿನಂತೆ ಮೀಸಲಿಡಲಾಗಿದೆ.

**ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ ಖಾಲಿ ಇರುವ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ 45 ಹುದ್ದೆಗಳ ಸಮತಲ ಮೀಸಲಾತಿ ನಿಗದಿಪಡಿಸಿದ ವಿವರ ಈ ಕೆಳಗಿನಂತಿದೆ.**

| ಕ್ರ.ಸಂ. | ಗ್ರಾಮ ಪಂಚಾಯತ ಹೆಸರು | ತಾಲ್ಲೂಕು | ನಿಗದಿಪಡಿಸಿದ ಮಿಸಲಾತಿ | ಷರಾ |
|---|---|---|---|---|
| 01. | ಆಲಗೂಡ | ಕಲಬುರಗಿ | ಪ.ಜಾ (ಇತರೆ) | |
| 02. | ಬಂಕಲಗಾ | ಅಫಜಲಪೂರ | ಸಾ.ಅ (ಇತರೆ) | |
| 03. | ಬಸವ ಪಟ್ಟಣ | ಕಲಬುರಗಿ | ಪ.ಪಂ. (ಇತರೆ) | |
| 04. | ಬೆಡಸೂರ | ಕಾಳಗಿ | ಸಾ.ಅ (ಮ.ಅ) | |
| 05. | ದನ್ನೂರ | ಆಳಂದ | ಪ್ರವರ್ಗ-I (ಇತರೆ) | |
| 06. | ಡೋಣಗಾಂವ | ಚಿತ್ತಾಪೂರ | ಸಾ.ಅ (ಗ್ರಾಮೀಣ) | |
| 07. | ಗರಗಪಳ್ಳಿ | ಚಿಂಚೋಳಿ | ಪ್ರವರ್ಗ-II A (ಇತರೆ) | |
| 08. | ಗಾರಂಪಳ್ಳಿ | ಚಿಂಚೋಳಿ | ಸಾ.ಅ (ಅಂ.ವಿ) | |
| 09. | ಘತ್ತರಗಾ | ಅಫಜಲಪೂರ | ಪ.ಜಾ (ಮ.ಅ) | |
| 10. | ಹಾಗರಗಾ | ಕಲಬುರಗಿ | ಸಾ.ಅ (ಮ.ಅ) | |
| 11. | ಹಾಳ ತಡಕಲ್ | ಆಳಂದ | ಪ್ರವರ್ಗ-II B (ಇತರೆ) | |
| 12. | ಹೇಬಳಿ | ಆಳಂದ | ಸಾ.ಅ (ಗ್ರಾಮೀಣ) | |
| 13. | ಹಿತ್ತಲ ಶಿರೂರ | ಆಳಂದ | ಪ್ರವರ್ಗ-II A (ಮ.ಅ) | |
| 14. | ಹುಲ್ಲೂರ | ಜೇವರ್ಗಿ | ಸಾ.ಅ (ಇತರೆ) | |
| 15. | ಇವಣಿ | ಚಿತ್ತಾಪೂರ | ಪ.ಜಾ (ಗ್ರಾಮೀಣ) | |
| 16. | ಜೆಟ್ಟೂರ | ಚಿಂಚೋಳಿ | ಸಾ.ಅ (ಮ.ಅ) | |
| 17. | ಕಾಚಪೂರ | ಯಡ್ರಾಮಿ | ಪ್ರವರ್ಗ-III A (ಇತರೆ) | |
| 18. | ಕರದಳ್ಳಿ | ಚಿತ್ತಾಪೂರ | ಪ.ಪಂ (ಮ.ಅ) | |
| 19. | ಕರ್ಕಿದಳ್ಳಿ | ಯಡ್ರಾಮಿ | ಪ್ರವರ್ಗ-III B (ಇತರೆ) | |
| 20. | ಕೆರೆ ಅಂಬಲಗಾ | ಆಳಂದ | ಸಾ.ಅ (ಗ್ರಾಮೀಣ) | |
| 21. | ಕುಪನೂರ | ಚಿಂಚೋಳಿ | ಪ್ರವರ್ಗ-IIA (ಗ್ರಾಮೀಣ) | |
| 22. | ಮಡಕಿ | ಕಮಲಾಪೂರ | ಸಾ.ಅ (ಮಾ.ಸೈ) | |
| 23. | ಮದರಿ | ಜೇವರ್ಗಿ | ಪ.ಜಾ (ಅಂ.ವಿ) | |
| 24. | ಮದರಾ (ಬಿ) | ಅಫಜಲಪೂರ | ಸಾ.ಅ (ಮ.ಅ) | |
| 25. | ಮಿಣಜಗಿ | ಕಲಬುರಗಿ | ಪ್ರವರ್ಗ-II A (ಅಂ.ವಿ) | |
| 26. | ಮುಗಳ ನಾಗಾಂವ | ಶಹಾಬಾದ | ಸಾ.ಅ (ಮ.ಅ) | |
| 27. | ಮೋಘಾ (ಕೆ) | ಆಳಂದ | ಪ.ಜಾ (ಮ.ಅ) | |
| 28. | ಮೋಘಲ್ | ಚಿತ್ತಾಪೂರ | ಸಾ.ಅ (ಗ್ರಾಮೀಣ) | |

| | | | | |
|---|---|---|---|---|
| 29. | ನಂದರಗಾ | ಅಫಜಲಪೂರ | ಪ್ರವರ್ಗ-II A (ಮ.ಅ) | |
| 30. | ನೇದಲಗಿ | ಜೇವರ್ಗಿ | ಸಾ.ಅ (ಕ.ಮಾ) | |
| 31. | ರಾಮನಗರ | ಅಫಜಲಪೂರ | ಪ್ರವರ್ಗ-I (ಮ.ಅ) | |
| 32. | ರಾಮಪೂರಹಳ್ಳಿ | ಚಿತ್ತಾಪೂರ | ಪ.ಪಂ (ಗ್ರಾಮೀಣ) | |
| 33. | ರಂಜಣಗಿ | ಜೇವರ್ಗಿ | ಪ.ಜಾ (ಗ್ರಾಮೀಣ) | |
| 34. | ಸರಡಗಿ (ಬಿ) | ಕಲಬುರಗಿ | ಸಾ.ಅ (ಮ.ಅ) | |
| 35. | ಸಾತಖೇಡ | ಯಡ್ರಾಮಿ | ಪ್ರವರ್ಗ-II B (ಮ.ಅ) | |
| 36. | ಶೇಳಗಿ | ಕಾಳಗಿ | ಸಾ.ಅ (ಗ್ರಾಮೀಣ) | |
| 37. | ಸಿಂಧನಮಡು | ಸೇಡಂ | ಪ್ರವರ್ಗ-IIA (ಗ್ರಾಮೀಣ) | |
| 38. | ಸುಂಬಡ | ಯಡ್ರಾಮಿ | ಸಾ.ಅ (ಯೋ.ನಿ.ಅ) | |
| 39. | ತಡೋಳ | ಆಳಂದ | ಪ.ಪಂ (ಅಂ.ವಿ) | |
| 40. | ತೇಲ್ಲೂರ | ಅಫಜಲಪೂರ | ಸಾ.ಅ (ಮ.ಅ) | |
| 41. | ಯಡಗಾ | ಸೇಡಂ | ಪ.ಜಾ (ಇತರೆ) | |
| 42. | ಪಡಸಾವಳಿ | ಆಳಂದ | ಸಾ.ಅ (ತೃತೀಯ ಲಿಂಗ) | |
| 43. | ಮಾಶ್ಯಾಳ | ಅಫಜಲಪೂರ | ಪ್ರವರ್ಗ-III B (ಮ.ಅ) | |
| 44. | ಕೂಡಲಹಂಗರಗಾ | ಆಳಂದ | ಸಾ.ಅ (ಮಾ.ಸೈ) | |
| 45. | ಮಹಾಗಾಂವ | ಕಮಲಾಪೂರ | ಪ್ರವರ್ಗ-II A (ಇತರೆ) | |

**1) ಶೈಕ್ಷಣಿಕ ವಿದ್ಯಾರ್ಹತೆ:**

*** ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸನಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಟ ಮೂರು ತಿಂಗಳ ಮಾನ್ಯತೆ ಪಡೆದ ಸಂಸ್ಥೆಯಿಂದ ಕಂಪ್ಯೂಟರ್ ಕೋರ್ಸನಲ್ಲಿ ಉತ್ತೀರ್ಣರಾಗಿರಬೇಕು.**

*** ಒಂದು ವೇಳೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸನಲ್ಲಿ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ ಪರೀಕ್ಷೆಯಲ್ಲಿ ಅಭ್ಯರ್ಥಿಯುಗಳಿಸಿದ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.**

* ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢೀಪಡಿಸಿಕೊಂಡು ನಂತರ ನೇಮಕಾತಿ ಆದೇಶ ನೀಡಲಾಗುವುದು.

* ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮನವಾದ ಅಂಕಗಳನ್ನು ಮೆರಿಟ್ ಹೊಂದಿದ್ದು, ವಯಸ್ಸಿನ ಹಿರಿಯರಾದವನ್ನು ಆಯ್ಕೆ ಮಾಡಲಾಗುವುದು. ಅದರಂತೆ ತಾತ್ಕಾಲಿಕ ಪಟ್ಟಿ ಪ್ರಕಟಿಸಲಾಗುವುದು.

* ಗ್ರಾಮ ಪಂಚಾಯತ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತತ್ಸಮಾನ ವಿದ್ಯಾರ್ಹತೆ ಹೊಂದಿದಲ್ಲಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

**2) ವಾಸಸ್ಥಳ:**

ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು, ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯತ ನಿವಾಸಿ ಲಭ್ಯತೆ ಇಲ್ಲದಿದ್ದಲ್ಲಿ ಆಯಾ ತಾಲ್ಲೂಕು ಪಂಚಾಯತಿಯ ವ್ಯಾಪ್ತಿಯಲ್ಲಿನ ಬೇರೆ ಗ್ರಾಮ ಪಂಚಾಯತ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು. ಸಂಬಂಧಿಸಿದಂತೆ, ಸಕ್ಷಮ ಪ್ರಾಧಿಕಾರವಾದ ತಹಸೀಲ್ದಾರ ಇವರಿಂದ ವಾಸಸ್ಥಳ ಪ್ರಮಾಣ ಪತ್ರ ಪಡೆದು ಸಲ್ಲಿಸತಕ್ಕದ್ದು.

**3) ವಯೋಮಿತಿ:**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂತೆ ಇರತಕ್ಕದ್ದು.

| | | |
|---|---|---|
| ಎ | **ಸಾಮಾನ್ಯ ವರ್ಗ** | 35 **ವರ್ಷ** |
| ಬಿ | **2ಎ, 2ಬಿ, 3ಎ, 3ಬಿ** | 38 **ವರ್ಷ** |
| ಸಿ | **ಪ.ಜಾ/ಪ.ಪಂ/ಪ್ರ-1** | 40 **ವರ್ಷ** |

ಮೇಲ್ಕಂಡ ಗರಿಷ್ಠ ವಯೋಮಿತಿಯ ಅಲ್ಲದೇ ವಿಧವೆಯರು/ ಮಾಜಿ ಸೈನಿಕರು ಮುಂತಾದ ವರ್ಗದವರಿಗೆ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ತಲುಪಿಸುವುದು ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ (ವರ್ಗಾವಣೆ ಪತ್ರ) ಕ್ಯುಮುಲೇಟಿವ್ ರೆಕಾರ್ಡನಲ್ಲಿ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

- **ಮಾಜಿ ಸೈನಿಕ:**

1) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಸಶಸ್ತ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವವೋ ಅಷ್ಟು ವರ್ಷಗಳು.

   ಎ) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯೂರಿಟಿಕೋರ್, ಜನರಲ್ ರಿಸರ್ವ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು (ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

   ಅ) ಮೇಲ್ಕಂಡ ದಳದ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ

   ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಲ್ಲಿ ಬಿಡುಗಡೆಯಾದವರನ್ನು ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರ್ಯಾಚುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥತೆಯಿಂದ ಬಿಡುಗಡೆಯಾದ ವ್ಯಕ್ತಿ.

3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ಬಿ. ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

- ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

- ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಆ ಕೆಲಸದಲ್ಲಿದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

- ಅಭ್ಯರ್ಥಿಯು ವಿಧವೆಯಾಗಿದಲ್ಲಿ 10 ವರ್ಷಗಳು (ಸಡಿಲಿಕೆ).

- ಅಭ್ಯರ್ಥಿಯು ಜೀತಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯು ವಯೋಮಿತಿ ಸಡಿಲಿಕೆ ಪಡೆಯಲು ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ(ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

- **ಅಂಗವಿಕಲ ಅಭ್ಯರ್ಥಿ:**

ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷಗಳು (ಸಡಿಲಿಕೆ). ಸರ್ಕಾರ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ:03-09-2005 ಮತ್ತು ದಿನಾಂಕ:01-08-2009 ರಲ್ಲಿ ದೃಷ್ಟಿ ಮಾಂದ್ಯ ಶ್ರವಣ ದೋಷವುಳ್ಳ, ಚಲನ ವಲನ ವೈಕಲ್ಯ ಕುಷ್ಠರೋಗದಿಂದ ಗುಣಮುಖರಾದ ಮತ್ತು ಬುದ್ಧಿ ಮಾಂದ್ಯತೆ/ಮಾನಸಿಕ ಅಸ್ವಸ್ಥತೆ (Low Vision Hearing impairment, locomotor disability, Leprosy cured, Mental retardation & Mental illness) ವೈಕಲ್ಯತೆಯೆಂದು ಪರಿಗಣಿಸಿದ್ದು, ಶೇ.40ಕ್ಕೆ ಕಡಿಮೆ ಇಲ್ಲದಂತೆ ಬಳಲುತ್ತಿರುವ ವ್ಯಕ್ತಿಗಳು.

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ:19-11-2005 ಸರ್ಕಾರದ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ: ಸಿಆಸುಇ 15 ಸೇನೆನಿ 2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು, ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

- **ಯೋಜನಾ ನಿರಾಶ್ರಿತ ಅಭ್ಯರ್ಥಿ:**

  ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 23 ಸೇನೆನಿ 99 ದಿನಾಂಕ:23-11-2000ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮಿಸಲಾತಿಗೆ ಅನ್ವಯವಾಗುವುದಿಲ್ಲ) ಈ ಮೀಸಲಾತಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರಬೇಕು.

- ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.
- ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆ ಕೊನೆಯಲ್ಲಿ ನೀಡಲಾಗಿರುತ್ತದೆ.

- **ತೃತೀಯ ಲಿಂಗ ಅಭ್ಯರ್ಥಿಗಳು:**

  ತೃತೀಯ ಲಿಂಗ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ ಸಂಬಂಧಿಸಿದ ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಲಗತ್ತಿಸುವುದು . (ಮಿಸಲಾತಿ ಕೋರಿದ್ದಲ್ಲಿ).

- ಈ ಮೇಲಿನ ಎಲ್ಲಾ ಪ್ರಮಾಣ ಪತ್ರಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.
- ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆ ಕೊನೆಯಲ್ಲಿ ನೀಡಲಾಗಿರುತ್ತದೆ.

- **ಗ್ರಾಮೀಣ ಅಭ್ಯರ್ಥಿ:**

  ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

- ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ ರವರಿಂದ ಪಡೆದಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ.

**ಸೂಚನೆ:**

ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ, ನಮೂನೆ-2 ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

*** ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆಯತಕ್ಕದ್ದು.

**4) ಜನ್ಮ ದಿನಾಂಕ:**

ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

**5) ಅರ್ಜಿ ಸಲ್ಲಿಸುವ ವಿಧಾನ:**

**ಭರ್ತಿ ಮಾಡಿದ ಅರ್ಜಿಗಳನ್ನು ಮುಚ್ಚಿದ ಲಕೋಟೆಯಲ್ಲಿ ಹಾಗೂ ಅರ್ಜಿಯ ಕವರ್‌ನ ಮೇಲೆ ಗ್ರಾಮ ಪಂಚಾಯತ ಹೆಸರನ್ನು ನಮೂದಿಸಿ ಕೊನೆಯ ದಿನಾಂಕ ದಂದು ಅಥವಾ ಒಳಗಾಗಿ ಸ್ವಯಂ ದೃಢೀಕರಿಸಿ ಉಪ ನಿರ್ದೇಶಕರು, ಜಿಲ್ಲಾ ಕೇಂದ್ರ ಗ್ರಂಥಾಲಯ ಕಲಬುರಗಿ ಕಛೇರಿಯಲ್ಲಿ ಸಲ್ಲಿಸತಕ್ಕದ್ದು.**

**6) ಅರ್ಜಿ ಶುಲ್ಕ:**

**ಅರ್ಜಿ ನಮೂನೆಯನ್ನು ರೂ.40-00 (ನಲವತ್ತು ರೂಪಾಯಿಗಳು) ಮಾತ್ರ ಪಾವತಿಸಿ ಉಪ ನಿರ್ದೇಶಕರು, ಜಿಲ್ಲಾ ಕೇಂದ್ರ ಗ್ರಂಥಾಲಯ ರೂ.26 ಮಿನಿ ವಿಧಾನ ಸೌಧ ಕಲಬುರಗಿ ಕಛೇರಿಯಲ್ಲಿ ಬೆಳಗ್ಗೆ 10:00 ಗಂಟೆಯಿಂದ 5:30ರ ಒಳಗಾಗಿ ಪಡೆಯತಕ್ಕದ್ದು.**

**7) ಜಾತಿ ಮೀಸಲಾತಿ ಪ್ರಮಾಣ ಪತ್ರ:**

ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ತಹಸೀಲ್ದಾರ ರವರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

- ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು.
- ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ "ಡಿ" ರಲ್ಲಿ
- ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ "ಇ" ನಲ್ಲಿ ಹಾಗೂ
- 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ "ಎಫ್" ನಲ್ಲಿ ಸಂಬಂಧಿತ ತಹಶೀಲ್ದಾರ ರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವನ್ನು ಈ ಹುದ್ದೆಗೆ ಅರ್ಜಿ ಸಲ್ಲಿಸುವ ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರಬೇಕು.
- ಹಿಂದುಳಿದ ವರ್ಗಗಳಾದ ಪ್ರ-2ಎ, 2ಬಿ, 3ಎ, 3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅಭ್ಯರ್ಥಿಗಳು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ 05 ವರ್ಷಗಳ ಅವಧಿಯಲ್ಲಿರಬೇಕು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ಅರ್ಜಿಯ ನಿಗದಿತ ಸ್ಥಳದಲ್ಲಿ ತಪ್ಪದೇ ನಮೂದಿಸಬೇಕು ಹಾಗೂ ಸಂದರ್ಶನಕ್ಕೆ ಅರ್ಹರಾಗಿ ಹಾಜರಾದಾಗ ಅದರ ಮೂಲ ಪ್ರಮಾಣ ಪತ್ರವನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

8) **ಆಯ್ಕೆ ವಿಧಾನ:**

- ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಷ್ಟರ್ ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಗ್ರಾಮ ಪಂಚಾಯತಿವಾರು ಬಂದಿರುವ ಅರ್ಜಿಗಳನ್ನು ಮೆರಿಟ್ ಆಧಾರದ ಮೇಲೆ ಖಾಲಿ ಹುದ್ದೆಗಳಿಗೆ (ರೋಸ್ಟರ್ ಬಿಂದುವಿನಂತೆ) ಸಮನಾಗಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರವಾರು ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

9) **ವೇತನ :**

ಸರ್ಕಾರದ ಆದೇಶ ಸಂಖ್ಯೆ RDPR 425 ಜಿಪಅ 2023 ದಿನಾಂಕ:16-08-2023. ರಂತೆ ಗ್ರಾಮ ಪಂಚಾಯತ ಗ್ರಂಥಾಲಯ ಮೇಲ್ವಿಚಾರಕರಿಗೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ ರೂ.15196.72/- ಹಾಗೂ ಕನಿಷ್ಟ ವೇತನ ಜೊತೆಗೆ ಕಾರ್ಮಿಕ ಇಲಾಖೆ ಕಾಲ ಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

**ಸಾಮಾನ್ಯ ಸೂಚನೆಗಳು:**

1) ಭಾರತೀಯ ನಾಗರೀಕನಾಗತಕ್ಕದ್ದು.
2) ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್.ಡಿ.ಪಿ.ಆರ್/156/ಜಿ.ಪಿ.ಎ/2022 (ಇ) ದಿನಾಂಕ:14-11-2022ರ ಪ್ರಕಾರ ಅಧಿಸೂಚಿಸಿದ ಹುದ್ದೆಗಳ ನೇಮಕಾತಿಗೆ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ.
3) ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಆಯ್ಕೆ ಸಮಿತಿಯ ಅಧ್ಯಕ್ಷರಾಗಿದ್ದು, ಜಿಲ್ಲೆಯನ್ನು ರೋಸ್ಟರ್ ಬಿಂದುಗಾಗಿ ಒಂದು ಯುನಿಟ್ ಎಂದು ಪರಿಗಣಿಸಿ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗನುಸಾರ ಕ್ರಮವಹಿಸುವ ಷರತ್ತುಗೊಳಿಗೊಳಪಟ್ಟಿರುತ್ತದೆ.
4) ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸುವ ಮುನ್ನ ಮೆರಿಟ್ ಹಾಗೂ ಸಮತಳ ಮಿಸಲಾತಿ ಆಧಾರದ ಮೇಲೆ ಮೂಲ ದಾಖಲಾತಿ ಪರಿಶೀಲನೆ ಮಾಡಲಾಗುವುದು.
5) ಅಭ್ಯರ್ಥಿಯ ನೈಜತೆ ದೃಢಪಡದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
6) ಈ ಮೇಲ್ಕಂಡ ನೇಮಕಾತಿಯು ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್.ಡಿ.ಪಿ.ಆರ್/ 156/ಜಿ.ಪಿ.ಎ /2022 (ಇ) ದಿನಾಂಕ:14-11-2022ರ ಷರತ್ತು ಮತ್ತು ನಿಬಂಧನೆಗೆ ಒಳಪಟ್ಟಿರುತ್ತದೆ. ಸದರಿ ಹುದ್ದೆಗಳ ಆಯ್ಕೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ/ ಆಯ್ಕೆ ಸಮಿತಿಯ ನಿರ್ಣಯಗಳ ಅಂತಿಮವಾಗಿರುತ್ತದೆ.
7) **ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08472-221069 ಸಂಪರ್ಕಿಸಿ ಮಾಹಿತಿ ಪಡೆಯಬಹುದು.**
8) ಅಭ್ಯರ್ಥಿಯು ಆಧಾರ ಕಾರ್ಡ ಅಥವಾ ಓಟರ್ ಐಡಿ ಇನ್ನಿತರೇ ಗುರುತಿನ ಚೀಟಿಯನ್ನು ಲಗತ್ತಿಸಬೇಕು.
9) ಕಾನೂನು ಬಾಹಿರ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡುಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
10) ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
11) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.

12) ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
13) ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

| **ಅರ್ಜಿಗಳನ್ನು ಪ್ರಾರಂಭ ಮಾಡುವ ದಿನಾಂಕ** | **ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ** |
|---|---|
| **25-09-2023** | **13-10-2023** |

**ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.**

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Schedule Caste |
| ಪ.ಪಂ | ಪರಿಶಿಷ್ಟ ಪಂಗಡ | ST | Schedule Tribe |
| ಪ್ರ-I | ಪ್ರವರ್ಗ-I | Cat-1 | Category-1 |
| 2ಎ | ಪ್ರವರ್ಗ-2ಎ | 2A | Category-2A |
| 2ಬಿ | ಪ್ರವರ್ಗ-2ಬಿ | 2B | Category-2B |
| 3ಎ | ಪ್ರವರ್ಗ-3ಎ | 3A | Category-3A |
| 3ಬಿ | ಪ್ರವರ್ಗ-3ಬಿ | 3B | Category-3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಯೋ.ಅ | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಅಂ.ವಿ | ಅಂಗವಿಕಲ | PH | Physical Handicapped Person |
| ತೃ.ಲಿ | ತೃತೀಯ ಲಿಂಗ | TG | Transgender |

19/9/2023

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಅಧ್ಯಕ್ಷರು
ಗ್ರಾ.ಪಂ.ಗ್ರಂ. ಮತ್ತು ಮಾಹಿತಿ ಕೇಂದ್ರ ಮೇಲ್ವಿಚಾರಕರ
ಆಯ್ಕೆ ಸಮಿತಿ ಜಿಲ್ಲಾ ಪಂಚಾಯತ ಕಲಬುರಗಿ.

ಪ್ರತಿಯನ್ನು:

1) ಮಾನ್ಯ ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಗಾಂಧಿನಗರ ಬೆಂಗಳೂರು ರವರ ಮಾಹಿತಿಗಾಗಿ.
2) ಉಪ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಲಬುರಗಿ ರವರಿಗೆ ರವಾನಿಸುತ್ತಾ ರಾಜ್ಯ ಮಟ್ಟದ ದಿನಪತ್ರಿಕೆಯಲ್ಲಿ ಸದರಿ ಅಧಿಸೂಚನೆಯನ್ನು ಉಚಿತವಾಗಿ ಪ್ರಕಟಿಸಲು ಕೋರಲಾಗಿದೆ.
3) ಉಪ ನಿರ್ದೇಶಕರು, ಜಿಲ್ಲಾ ಕೇಂದ್ರ ಗ್ರಂಥಾಲಯ ಕಲಬುರಗಿ ರವರ ಮಾಹಿತಿಗಾಗಿ.
4) ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ರವರ ಮಾಹಿತಿಗಾಗಿ ಹಾಗೂ ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಸಾರ್ವಜನಿಕರ ಗಮನಕ್ಕಾಗಿ ಪ್ರಕಟಿಸಲು ಹಾಗೂ ಜಿಲ್ಲೆಯ ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಮಾಹಿತಿಗಾಗಿ ಹಾಗೂ ತಮ್ಮ ಕಛೇರಿಯ ಹಾಗೂ ತಮ್ಮ ಗ್ರಾಮ ಪಂಚಾಯತಿ ಮಟ್ಟದ ಎಲ್ಲಾ ಕಛೇರಿಯ ಸೂಚನಾ ಫಲಕದಲ್ಲಿ ಸಾರ್ವಜನಿಕರ ಗಮನಕ್ಕಾಗಿ ಪ್ರಕಟಿಸಲು ಸೂಚಿಸಿದೆ.
5) ಕಛೇರಿ ಕಡತಕ್ಕೆ.